ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು :

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 24.12.29ರ 4ನೇ ಪಟ್ಟಿಯಿಂದ ಲಿಖಿತ ಮೂಲಕ ಉತ್ತರಿಸುವ 81 ಪ್ರಶ್ನೆಗಳ ಪೈಕಿ 76 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

(ಅನುಬಂಧ-1)

2. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು :

ಅ) ವಿಷಯ : ರಾಯಚೂರು ಜಿಲ್ಲೆಯಲ್ಲಿ ಸರ್ಕಾರಿ ನೌಕರರ ಪ್ರತಿಭಟನೆ

ಶ್ರೀ ವೆಂಕಟರಾವ್ ನಾಡಗೌಡ (ಏಂಧನೂರು) : ಮಾನ್ಯ ಅಧ್ಯಕ್ಷರೆ, ನೆನ್ನೆ ನಾನು ಶೂನ್ಯವೇಳೆಯಲ್ಲಿ ಪ್ರಶ್ನೆಯನ್ನು ಕೇಳಬೇಕೆಂದು ವಿನಂತಿ ಮಾಡಿದ್ದೆ, ರಾಯಚೂರು ಜಿಲ್ಲೆಯಲ್ಲಿ ಎಲ್ಲಾ ಸರ್ಕಾರಿ ನೌಕರರು ಸಾಮೂಹಿಕ ರಜೆ ಮೇಲೆ ಹೋಗಿ, ಸರ್ಕಾರ ಅವರಿಗೆ ರಕ್ಷಣೆ ಕೊಡುತ್ತಿಲ್ಲ ಎನ್ನುವುದನ್ನು ಮೆರವಣಿಗೆ ಮಾಡುವುದರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. ಇದರ ಬಗ್ಗೆ ಮಾನ್ಯ ಸರ್ಕಾರದ ಗಮನವನ್ನು ಸೆಳೆಯುತ್ತೇನೆ.

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು 23.12.2009 ರಂದು ರಾಯಚೂರು ಜಿಲ್ಲೆಯ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಒಂದು ದಿವಸದ ಪ್ರತಿಭಟನೆ ನಡೆಸಿದರು. ಅದರ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ. ನಾವು ಮಾಹಿತಿ ತರಿಸಿಕೊಂಡಿರುವ ರೀತಿಯಲ್ಲಿ ಅವರು ತಮ್ಮ ಮೇಲೆ ಆಗುತ್ತಿದ್ದ ಹಲ್ಲೆಯನ್ನು ಪ್ರತಿಭಟಿಸಿ ಅರ್ಧ ದಿವಸ ರಜ ಹಾಕಿದ್ದು ನಿಜ. ಅದಾದ ನಂತರ ಜಿಲ್ಲಾಧಿಕಾರಿಗಳು ಅವರನ್ನು ಕರೆಸಿ ಮಾತನಾಡಿದ ಮೇಲೆ ಅರ್ಧ ದಿನದ ನಂತರ ಕರ್ತವ್ಯಕ್ಕೆ ಹಾಜರಾಗಿ ಇನ್ನು ಒಂದು ತಾಸು ಹೆಚ್ಚಿಗೆ ಕೆಲಸ ಮಾಡಿದ್ದಾರೆ. ಯಾರ್ಯಾರು ಈ ರೀತಿ ಹಲ್ಲೆ ಮಾಡುತ್ತಿದ್ದರೋ ಅವರ ಮೇಲೆ ಕ್ರಿಮಿನಲ್ ಕೇಸ್‌ಗಳನ್ನು ಬುಕ್ ಮಾಡಿದ್ದಾರೆ.

ಶ್ರೀ ಬಂಡೆಪ್ಪ ಕಾಶಂಪೂರ್ : ಮಾನ್ಯ ಅಧ್ಯಕ್ಷರೆ, ಒಂದು ಜಿಲ್ಲೆಯಲ್ಲಿ ಎಲ್ಲಾ ಸಿಬ್ಬಂದಿ ರಜ ಹಾಕಿ ಹೋಗುತ್ತಾರೆ ಎಂದರೆ, ಸರ್ಕಾರ ಇದನ್ನು ಸ್ಪಷ್ಟಪಡಿಸಬೇಕು. ಯಾರು ಅವರಿಗೆ ಕಿರುಕುಳ ನೀಡುತ್ತಿದ್ದಾರೆ. ಏನಾಗುತ್ತಿದೆ